**ಹಿರಿಯ ದಿವಾಣಿ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ತಿ. ನರಸೀಪುರ**

**ಸಿಸಿ ಸಂಖ್ಯೆ: 67/2017**

ಚಾಸಾ–10, ಫ್ರಾ.ಸಾ–07

| | | |
|---|---|---|
| ಹೆಸರು | : | ಬೀರೇಗೌಡ |
| ತಂದೆಯ ಹೆಸರು | : | ಲೇಟ್ ಹುಚ್ಚೇಗೌಡ |
| ವಯಸ್ಸು | : | 70 |
| ವೃತ್ತಿ | : | ವ್ಯವಸಾಯ |
| ವಾಸ | : | ಕೊಣಗಹಳ್ಳಿ ಗ್ರಾಮ, ತಿ. ನರಸೀಪುರ ತಾಲ್ಲೂಕು |

**ದಿನಾಂಕ 07.11.2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದಃ**

ಸುಮಾರು 4–5 ವರ್ಷಗಳ ಹಿಂದೆ ನಾನು ತಿ. ನರಸೀಪುರ ಪೊಲೀಸ್ ಠಾಣೆಯಲ್ಲಿ ಪೊಲೀಸರ ಹೇಳಿಕೆ ಮೇರೆಗೆ ಪಂಚನಾಮಕ್ಕೆ ಹೆಬ್ಬೆಟ್ಟಿನ ಗುರುತು ಹಾಕಿರುತ್ತೇನೆ. ನನ್ನ ಸಮಕ್ಷಮ ಪಂಚನಾಮ ಜರುಗಿಸಿಲ್ಲ.

ನನಗೆ ಈಗ ತೋರಿಸಿದ ದಾಖಲೆಯಲ್ಲಿ ನನ್ನ ಹೆಬ್ಬೆಟ್ಟಿನ ಗುರುತು ಇದ್ದು, ಆ ದಾಖಲೆಯು ಪಂಚನಾಮವಾಗಿದ್ದು, ಅದು ಈಗಾಗಲೇ ನಿಪಿ.5 ಎಂದು ಗುರುತಿಸಲ್ಪಟ್ಟಿದೆ.

**ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ, ಮಾನ್ಯ ಎಪಿಪಿ ರವರು ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಕೋರಿದ್ದು, ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ, ಮಾನ್ಯ ಎಪಿಪಿ ರವರ ಕೋರಿಕೆಯನ್ನು ಪರಿಗಣಿಸಿ ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ**

ದಿನಾಂಕ 18.04.2015 ರಂದು ಮಧ್ಯಾಹ್ನ 3.30 ರಿಂದ 4.15 ಗಂಟೆ ಸಮಯದಲ್ಲಿ ಪ್ರಾಸಾ-3 ರವರು ತೋರಿಸಿದ ಘಟನಾ ಸ್ಥಳದಲ್ಲಿ ಪೊಲೀಸರು ನನ್ನ ಮತ್ತು ಪ್ರಾಸಾ-1 ರವರ ಸಮಕ್ಷಮ ಪಂಚನಾಮವನ್ನು ನಿ.ಪಿ.5 ರಂತೆ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು : ಆರೋಪಿತರ ಪರ ವಕೀಲರಿಂದ ಇರುವುದಿಲ್ಲ.**

(ತೆ ನ್ಯಾದಲ್ಲಿ ಬೆರಳಚ್ಚುಗೊಳಿಸಲಾಯಿತು)
ಓ ಹೇ ಕೇ ಸರಿ ಇದೆ

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರಥಮ ದರ್ಜೆ ನ್ಯಾಯಿಕದಂಡಾಧಿಕಾರಿ,**
**ತಿ.ನರಸೀಪುರ**